ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	: 779
ಉತ್ತರಿಸಬೇಕಾದ ದಿನಾಂಕ	: 25.09.2020
ಸದಸ್ಯರ ಹೆಸರು	: ಶ್ರೀ ಎಸ್. ಎಲ್. ಭೋಜೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ಸಚಿವರು	: ಮಾನ್ಯ ಪ್ರವಾಸೋದ್ಯಮ ಮತ್ತು ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು

<table>
<tr><th>ಕ್ರಸ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಕಳೆದ 3 ವರ್ಷಗಳಿಂದ ಕ್ರೀಡಾ ವಸತಿ ಶಾಲೆಗಳಿಗೆ ನೀಡಿರುವ ಅನುದಾನ ಎಷ್ಟು; (ವಿವರ ನೀಡುವುದು)</td><td>ಕಳೆದ 03 ವರ್ಷಗಳಿಂದ ಕ್ರೀಡಾ ವಸತಿ ಶಾಲೆ/ನಿಲಯಗಳಿಗೆ ನೀಡಲಾಗಿರುವ ಅನುದಾನದ ವಿವರ ಕೆಳಕಂಡಂತಿದೆ:-
<table>
<tr><th>ಕ್ರಸ</th><th>ವರ್ಷ</th><th>ಅನುದಾನ (ರೂ ಲಕ್ಷಗಳಲ್ಲಿ)</th></tr>
<tr><td>1</td><td>2017-18</td><td>1800.00</td></tr>
<tr><td>2</td><td>2018-19</td><td>2160.00</td></tr>
<tr><td>3</td><td>2019-20</td><td>2300.00</td></tr>
</table></td></tr>
<tr><td>ಆ</td><td>ಕ್ರೀಡಾ ವಸತಿ ಶಾಲೆಗಳಿಗೆ ಯಾವ ಮಾನದಂಡ/ನಿಯಮಗಳ ಮೇಲೆ ಕ್ರೀಡಾಪಟುಗಳನ್ನು ಆಯ್ಕೆ ಮಾಡಿಕೊಳ್ಳಲಾಗುತ್ತದೆ; (ವಿವರ ನೀಡುವುದು)</td><td>ದೈಹಿಕ ಕ್ಷಮತೆ ಮತ್ತು ಆಯಾ ಕ್ರೀಡೆಗೆ ಸಂಬಂಧಿಸಿದ ಕೌಶಲ್ಯ ಪರೀಕ್ಷೆಗಳನ್ನು ಆಧರಿಸಿ ಕ್ರೀಡಾಪಟುಗಳಿಗೆ ಕ್ರೀಡಾ ವಸತಿ ಶಾಲೆ/ನಿಲಯಗಳಿಗೆ ಕ್ರೀಡಾಪಟುಗಳನ್ನು ಆಯ್ಕೆ ಮಾಡಲಾಗುತ್ತಿದೆ. ಅಲ್ಲದೇ, ಸಾಧಕ ಕ್ರೀಡಾಪಟುಗಳಿಗೆ ಕ್ರೀಡಾ ವಸತಿ ಶಾಲೆ/ನಿಲಯಗಳಿಗೆ ನೇರ ಪ್ರವೇಶಕ್ಕೆ ಅವಕಾಶ ಕಲ್ಪಿಸಲಾಗಿದೆ.</td></tr>
<tr><td>ಇ</td><td>ರಾಜ್ಯದ ಎಲ್ಲಾ ಕ್ರೀಡಾ ವಸತಿ ಶಾಲೆಗಳಲ್ಲಿ ಮೂಲಭೂತ ಸೌಕರ್ಯ ಒದಗಿಸಲಾಗಿದೆಯೇ; ಕೊರತೆ ಇದ್ದಲ್ಲಿ ಸರ್ಕಾರದಿಂದ ಏನು ಕ್ರಮ ತೆಗೆದುಕೊಳ್ಳಲಾಗಿದೆ;</td><td>ರಾಜ್ಯದ ಎಲ್ಲಾ ಕ್ರೀಡಾ ವಸತಿ ಶಾಲೆ/ನಿಲಯಗಳಲ್ಲಿ ಕ್ರೀಡಾಪಟುಗಳ ವಾಸ್ತವ್ಯ ಹಾಗೂ ಕ್ರೀಡಾ ತರಬೇತಿಗೆ ಅಗತ್ಯವಾದ ಕನಿಷ್ಟ ಮೂಲಸೌಕರ್ಯಗಳನ್ನು ಕಲ್ಪಿಸಲಾಗಿದೆ. ಹೆಚ್ಚುವರಿ ಸೌಲಭ್ಯಗಳನ್ನು ಮೇಲ್ದರ್ಜೆಗೇರಿಸಲು ಹಂತ-ಹಂತವಾಗಿ ಕ್ರಮ ವಹಿಸಲಾಗುತ್ತಿದೆ.

ಕ್ರೀಡಾಪಟುಗಳಿಗೆ ವಾಸ್ತವ್ಯಕ್ಕಾಗಿ ಹೊಸ ವಸತಿ ನಿಲಯ ಕಟ್ಟಡಗಳ ನಿರ್ಮಾಣ, ಹಳೆಯ ವಸತಿ ನಿಲಯ ಕಟ್ಟಡಗಳ ನವೀಕರಣ, ಅಡುಗೆ ಮನೆ-ಊಟದ ಹಾಲ್ ನವೀಕರಣ, ಆಹಾರ ಪದಾರ್ಥಗಳ ಆಧುನಿಕ ವ್ಯವಸ್ಥೆ, ಹೆಚ್ಚುವರಿ ಶೌಚಾಲಯ ಮತ್ತು ಸ್ನಾನಗೃಹಗಳ ನಿರ್ಮಾಣ, ಓದಲು-ಬರೆಯಲು ಟೇಬಲ್, ಕುರ್ಚಿ, ವಾಷಿಂಗ್ ಮಷಿನ್‌ಗಳ ಅಳವಡಿಕೆ, ಕ್ರೀಡಾ ತರಬೇತಿಗೆ ಅಗತ್ಯವಾದ ಆಧುನಿಕ ಕ್ರೀಡೋಪಕರಣಗಳು, ಕ್ರೀಡಾ ವಿಜ್ಞಾನ ಕೇಂದ್ರ ಮತ್ತಿತರ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.</td></tr>
</table>

ಈ	ಎಲ್ಲಾ ಆಟಗಳಿಗೆ ತರಬೇತುದಾರರನ್ನು ನೇಮಿಸಲಾಗಿದೆಯೇ; ಖಾಯಂ/ಗುತ್ತಿಗೆ ನೌಕರರ ಸಂಖ್ಯೆ ಎಷ್ಟು? (ವಿವರ ನೀಡುವುದು)	ರಾಜ್ಯದ ವಿವಿಧ ಭಾಗಗಳಲ್ಲಿ ಒಟ್ಟು 34 ಕ್ರೀಡಾ ವಸತಿ ಶಾಲೆ/ನಿಲಯಗಳು ಕಾರ್ಯ ನಿರ್ವಹಿಸುತ್ತಿದ್ದು, 14 ವಿವಿಧ ಕ್ರೀಡೆಗಳಲ್ಲಿ ತರಬೇತಿ ನೀಡಲಾಗುತ್ತಿದೆ. ಆಯಾ ಕ್ರೀಡಾ ವಸತಿ ಶಾಲೆ/ನಿಲಯಗಳಿಗೆ ನಿಗದಿಪಡಿಸಿರುವ ಕ್ರೀಡೆಯ ಕ್ರೀಡಾಪಟುಗಳಿಗೆ ಪ್ರವೇಶ ನೀಡಲಾಗುತ್ತಿದ್ದು, ಕ್ರೀಡಾ ತರಬೇತುದಾರರ ಸೇವೆ ಒದಗಿಸಲಾಗಿದ್ದು, ಕ್ರೀಡಾ ತರಬೇತಿ ನೀಡಲಾಗುತ್ತಿದೆ. ನಾಲ್ಕು ಜಿಲ್ಲಾ ಕ್ರೀಡಾ ವಸತಿ ನಿಲಯಗಳಲ್ಲಿ ಫುಟ್ಬಾಲ್ ತರಬೇತುದಾರರ ಕೊರತೆ ಇರುತ್ತದೆ. ಕ್ರೀಡಾ ವಸತಿ ಶಾಲೆ/ನಿಲಯಗಳಲ್ಲಿ ಕರ್ನಾಟಕ ಕ್ರೀಡಾ ಪ್ರಾಧಿಕಾರದ ಮಾಸಿಕ ಸಂಚಿತ ವೇತನ ಆಧಾರದಲ್ಲಿ ಸೇವೆಯಲ್ಲಿರುವ 52 ತರಬೇತುದಾರರು ಹಾಗೂ ಗುತ್ತಿಗೆ ಆಧಾರದಲ್ಲಿ ಸೇವೆಯಲ್ಲಿರುವ 55 ತರಬೇತುದಾರರು ಕಾರ್ಯ ನಿರ್ವಹಿಸುತ್ತಿದ್ದಾರೆ. ಪೊಲೀಸ್ ಇಲಾಖೆಯಿಂದ ಒಬ್ಬರು ನಿಯೋಜನೆ ಮೇಲೆ ತರಬೇತುದಾರರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ.

ವೈಎಸ್ ಡಿ-/ಇಬಿಬಿ/103/2020

(ಸಿ. ಟಿ. ರವಿ)
ಪ್ರವಾಸೋದ್ಯಮ ಮತ್ತು ಕನ್ನಡ ಮತ್ತು ಸಂಸ್ಕೃತಿ
ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು.